ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**23.12.2025** **1.10 p.m.**

**<><><><>**

ಮುಖ್ಯಾಂಶಗಳು

1. ದೇಶದ ಭದ್ರತೆ, ಏಕತೆ ಮತ್ತು ಸಮಗ್ರತೆ ಕಾಪಾಡುವಲ್ಲಿ ಗುಪ್ತಚರ ಇಲಾಖೆ ಪಾತ್ರ ಮಹತ್ವದ್ದು- ರಾಷ್ಟ್ರಪತಿ ದ್ರೌಪದಿ ಮುರ್ಮು
2. ದಿತ್ವಾ ಚಂಡಮಾರುತ; ಶ್ರೀಲಂಕಾದಲ್ಲಿ ಹಾನಿಗೊಳಗಾದ ಪ್ರದೇಶಗಳ ಪುನರ್‌ನಿರ್ಮಾಣಕ್ಕೆ ೪೫೦ ಮಿಲಿಯನ್ ಡಾಲರ್ ಪ್ಯಾಕೇಜ್ ಘೋಷಿಸಿದ ಭಾರತ
3. 'ವಿಕಸಿತ ಭಾರತ, ಜಿ ರಾಮ್ ಜಿ' ಯೋಜನೆ; ಒಂದು ಲಕ್ಷದ ೫೧ ಸಾವಿರ ಕೋಟಿ ರೂಪಾಯಿಗೂ ಅಧಿಕ ಹಣ ಹಂಚಿಕೆಗೆ ಪ್ರಸ್ತಾಪ -ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್
4. ಜಮ್ಮು-ಕಾಶ್ಮೀರದ ಕುಪ್ವಾರಾದಲ್ಲಿ ಅಪಾರ ಪ್ರಮಾಣದ ಶಸ್ತ್ರಾಸ್ತ್ರ, ಮದ್ದುಗುಂಡು ವಶಪಡಿಸಿಕೊಂಡ ಭದ್ರತಾ ಪಡೆ

<><><>

ದೇಶವಾಸಿಗಳಿಗೆ ಭದ್ರತೆ ಒದಗಿಸುವಲ್ಲಿ ಮತ್ತು ರಾಷ್ಟ್ರದ ಏಕತೆ ಮತ್ತು ಸಮಗ್ರತೆಯನ್ನು ಖಚಿತಪಡಿಸುವಲ್ಲಿ ಗುಪ್ತಚರ ಇಲಾಖೆ ಅದ್ಭುತ ಪಾತ್ರ ವಹಿಸುತ್ತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ನವದೆಹಲಿಯಲ್ಲಿಂದು ೩೮ನೇ ಗುಪ್ತಚರ ಇಲಾಖೆ ಶತಮಾನೋತ್ಸವ ದತ್ತಿ ಉಪನ್ಯಾಸ ನೀಡಿದ ರಾಷ್ಟ್ರಪತಿಗಳು, ಕಳೆದ ದಶಕದಲ್ಲಿ ಗುಪ್ತಚರ ಇಲಾಖೆ ಮುಂತಾದ ಭದ್ರತಾ ಸಂಸ್ಥೆಗಳು ದೇಶದೊಳಗಿನ ಹಲವಾರು ಬೆದರಿಕೆಗಳನ್ನು ತಟಸ್ಥಗೊಳಿಸಿವೆ ಎಂದು ಹೇಳಿದರು. ದೇಶದ ಆಂತರಿಕ ಭದ್ರತೆಗಾಗಿ ಗುಪ್ತಚರ ಇಲಾಖೆ ನೀಡಿದ ಅಸಾಧಾರಣ ಕೊಡುಗೆಗೆ ರಾಷ್ಟ್ರಪತಿಗಳು ತಮ್ಮ ಆಳವಾದ ಮೆಚ್ಚುಗೆಯನ್ನು ವ್ಯಕ್ತಪಡಿಸಿದರು. ಗುಪ್ತಚರ ಇಲಾಖೆ ಅದೃಶ್ಯ ವೀರರ ಸಂಸ್ಥೆ ಎಂದು ಅವರು ಹೇಳಿದರು. ಕೇಂದ್ರ ಗೃಹ ಸಚಿವ ಅಮಿತ್ ಶಾ, ಗೃಹ ಖಾತೆ ರಾಜ್ಯ ಸಚಿವ ಬಂಡಿ ಸಂಜಯ್ ಕುಮಾರ್, ಗೃಹ ಕಾರ್ಯದರ್ಶಿ ಗೋವಿಂದ್ ಮೋಹನ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><><>

ಎಲ್ಲರನ್ನೂ ಒಳಗೊಂಡ ಬೆಳವಣಿಗೆ ಮತ್ತು ರಾಷ್ಟ್ರೀಯ ಪರಿವರ್ತನೆಗಾಗಿ ಕೃತಕ ಬುದ್ಧಿಮತ್ತೆಯ ಸುತ್ತಲಿನ ನೀತಿಗಳು ಮತ್ತು ಧ್ಯೇಯಗಳನ್ನು ರೂಪಿಸುವಲ್ಲಿ ಭಾರತ ಜಾಗತಿಕವಾಗಿ ಅತ್ಯಂತ ಪೂರ್ವಭಾವಿ ರಾಷ್ಟ್ರಗಳಲ್ಲಿ ಒಂದಾಗಿ ಹೊರಹೊಮ್ಮಿದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ಕೃತಕ ಬುದ್ಧಿಮತ್ತೆ ವಿಕಸನದ ಕುರಿತಾದ ರಾಷ್ಟ್ರೀಯ ಸಮಾವೇಶ - ಎಐ ನ ಮಹಾಕುಂಭವನ್ನು ಉದ್ದೇಶಿಸಿ ಮಾತನಾಡಿದ ಅವರು, ಶಾಲೆಗಳು ಮತ್ತು ಕಾಲೇಜುಗಳಲ್ಲಿ ಎಐ ಪಠ್ಯಕ್ರಮದ ಅವಿಭಾಜ್ಯ ಅಂಗವಾಗಿರಬೇಕು ಎಂದು ಹೇಳಿದರು.

<><><>

ಶ್ರೀಲಂಕಾದಲ್ಲಿ ದಿತ್ವಾ ಚಂಡಮಾರುತದಿಂದ ಹಾನಿಗೊಳಗಾದ ಪ್ರದೇಶಗಳ ಪುನರ್‌ನಿರ್ಮಾಣಕ್ಕೆ ಸಹಾಯ ಮಾಡಲು ಭಾರತ, ೪೫೦ ಮಿಲಿಯನ್ ಡಾಲರ್ ಪ್ಯಾಕೇಜ್ ಅನ್ನು ನೀಡಲಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ತಿಳಿಸಿದ್ದಾರೆ. ಕೊಲಂಬೊದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಈ ಪ್ಯಾಕೇಜ್ ದೇಶದ ಚಂಡಮಾರುತ ಪೀಡಿತ ಪ್ರದೇಶಗಳ ಪುನರ್‌ನಿರ್ಮಾಣವನ್ನು ಬೆಂಬಲಿಸುವ ಗುರಿಯನ್ನು ಹೊಂದಿರುವ, ೩೫೦ ಮಿಲಿಯನ್ ರಿಯಾಯಿತಿ ಸಾಲ ಹಾಗೂ ೧೦೦ ಮಿಲಿಯನ್ ಡಾಲರ್ ಅನುದಾನವನ್ನು ಒಳಗೊಂಡಿದೆ ಎಂದು ಹೇಳಿದ್ದಾರೆ.

**ಧ್ವನಿ: ಡಾ.ಎಸ್.ಜೈಶಂಕರ್ ( ೨೦ ಸೆಕೆಂಡ್ಸ್)**

ರಸ್ತೆ, ರೈಲ್ವೆ ಮತ್ತು ಸೇತುವೆ ಸಂಪರ್ಕದ ಪುನಃಸ್ಥಾಪನೆ, ಸಂಪೂರ್ಣವಾಗಿ ನಾಶವಾದ ಮತ್ತು ಭಾಗಶಃ ಹಾನಿಗೊಳಗಾದ ಮನೆಗಳ ನಿರ್ಮಾಣಕ್ಕೆ ಬೆಂಬಲ ಸೇರಿದಂತೆ ಈ ಚಂಡಮಾರುತದಿಂದ ಹೆಚ್ಚು ಹಾನಿಗೊಳಗಾದ ಕ್ಷೇತ್ರಗಳಿಗೆ ಭಾರತದ ನೆರವು ನೀಡಲಿದೆ ಎಂದು ತಿಳಿಸಿದರು. ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು, ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸಾನಾಯಕ ಅವರನ್ನು ಭೇಟಿ ಮಾಡಿ, ಚಂಡಮಾರುತದಿಂದ ಉಂಟಾದ ಹಾನಿಯ ಬಗ್ಗೆ ವಿವರವಾದ ಚರ್ಚೆ ನಡೆಸಿ, ಪ್ರಧಾನಿ ನರೇಂದ್ರ ಮೋದಿಯವರ ಪತ್ರವನ್ನು ಹಸ್ತಾಂತರಿಸಿದರು. ಭಾರತದ ನೆರೆಹೊರೆ ಮೊದಲು ಮತ್ತು ಮಹಾಸಾಗರ್ ನೀತಿಗೆ ಅನುಗುಣವಾಗಿ, ಶ್ರೀಲಂಕಾ ಚಂಡಮಾರುತದಿಂದ ಉಂಟಾದ ಬಿಕ್ಕಟ್ಟನ್ನು ಎದುರಿಸಿದ ಸಂದರ್ಭದಲ್ಲಿ ಮತ್ತು ಆರ್ಥಿಕ ತೊಂದರೆಗಳನ್ನು ಎದುರಿಸಿದ ಸಮಯದಲ್ಲಿ ಭಾರತ ತಕ್ಷಣವೇ ಸಹಾಯಕ್ಕೆ ಧಾವಿಸಿದೆ.

'ಆಪರೇಷನ್ ಸಾಗರ್ ಬಂಧು' ಅಡಿಯಲ್ಲಿ, ಭಾರತವು ಸುಮಾರು ೧೧ ನೂರು ಟನ್ ಪರಿಹಾರ ಸಾಮಗ್ರಿಗಳು ಮತ್ತು ೧೪.೫ ಟನ್‌ಗಳಿಗೂ ಹೆಚ್ಚು ಔಷಧಗಳು ಮತ್ತು ವೈದ್ಯಕೀಯ ಉಪಕರಣಗಳನ್ನು ನೆರೆಯ ದೇಶಕ್ಕೆ ತಲುಪಿಸಿದೆ ಎಂದು ಅವರು ಹೇಳಿದರು. ಶ್ರೀಲಂಕಾ ತನ್ನ ಕಷ್ಟದ ಸಮಯದಲ್ಲಿ ಬೆಂಬಲವನ್ನು ನೀಡುತ್ತಾ, ಭಾರತವು ಶ್ರೀಲಂಕಾದಲ್ಲಿ ಪ್ರವಾಸೋದ್ಯಮವನ್ನು ಪ್ರೋತ್ಸಾಹಿಸುವುದನ್ನು ಮುಂದುವರಿಸುತ್ತದೆ ಮತ್ತು ರಾಷ್ಟ್ರವು ವಿದೇಶಿ ನೇರ ಹೂಡಿಕೆಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ ಎಂದು ಸಚಿವರು ಭರವಸೆ ನೀಡಿದರು.

<><><><>

ದೇಶದಲ್ಲಿ ಉದ್ಯೋಗ ಸೃಷ್ಟಿ ಮತ್ತು ಸಮಗ್ರ ಗ್ರಾಮೀಣಾಭಿವೃದ್ಧಿಗೆ ಸಾಕಷ್ಟು ಹಣವನ್ನು ಖಚಿತಪಡಿಸಿಕೊಳ್ಳಲು 'ವಿಕಸಿತ ಭಾರತ, ಜಿ ರಾಮ್ ಜಿ' ಯೋಜನೆಯಡಿಯಲ್ಲಿ ಒಂದು ಲಕ್ಷದ ೫೧ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಹಂಚಿಕೆಯನ್ನು ಪ್ರಸ್ತಾಪಿಸಲಾಗಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ವೀಡಿಯೊ ಸಂದೇಶವೊಂದರಲ್ಲಿ ಸಚಿವರು, ಕಾರ್ಮಿಕರಿಗೆ ಈಗ ೧೦೦ ದಿನಗಳ ಬದಲಿಗೆ ೧೨೫ ದಿನಗಳ ಉದ್ಯೋಗವನ್ನು ಕಾನೂನುಬದ್ಧವಾಗಿ ಖಾತರಿಪಡಿಸಲಾಗಿದೆ ಎಂದು ಹೇಳಿದ್ದಾರೆ. ಎಂಜಿಎನ್‌ಆರ್‌ಇಜಿಎ ಹೆಸರಿನಲ್ಲಿ ಮತ್ತೊಮ್ಮೆ ರಾಷ್ಟ್ರವನ್ನು ದಾರಿ ತಪ್ಪಿಸಲು ಉದ್ದೇಶಪೂರ್ವಕ ಪ್ರಯತ್ನ ನಡೆಯುತ್ತಿದೆ. ಈ ಯೋಜನೆ ಎಂಜಿಎನ್‌ಆರ್‌ಇಜಿಎಯಿಂದ ಪ್ರಗತಿಪರ ಹೆಜ್ಜೆಯಾಗಿದೆ. ಕೆಲಸ ಲಭ್ಯವಿಲ್ಲದ ಸಂದರ್ಭದಲ್ಲಿ ನಿರುದ್ಯೋಗ ಭತ್ಯೆಯನ್ನು ನೀಡುವ ನಿಬಂಧನೆಯನ್ನು ಮತ್ತಷ್ಟು ಬಲಪಡಿಸಲಾಗಿದೆ ಎಂದು ಅವರು ತಿಳಿಸಿದರು.

**ಧ್ವನಿ: ಶಿವರಾಜ್ ಸಿಂಗ್ ಚೌಹಾಣ್ ( ೨೯ ಸೆಕೆಂಡ್ಸ್)**

<><><><>

ಜಮ್ಮು ಮತ್ತು ಕಾಶ್ಮೀರದ ಕುಪ್ವಾರಾ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ಇಂದು ನಡೆಸಿದ ಕಾರ್ಡನ್ ಮತ್ತು ಶೋಧ ಕಾರ್ಯಾಚರಣೆಯಲ್ಲಿ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದೆ. ಹಂದ್ವಾರ ಉಪವಿಭಾಗದ ರಾಜ್‌ಪೋರಾ ಅರಣ್ಯ ಪ್ರದೇಶದಲ್ಲಿ ಭದ್ರತಾ ಪಡೆಗಳು ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಂಡಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಶೋಧ ಸಮಯದಲ್ಲಿ, ಅನುಮಾನಾಸ್ಪದ ಸ್ಥಳವನ್ನು ಗುರುತಿಸಲಾಯಿತು, ಇದರಿಂದಾಗಿ ಅರಣ್ಯ ಪ್ರದೇಶದಲ್ಲಿ ಅಡಗಿಸಿಟ್ಟಿದ್ದ ಮದ್ದುಗುಂಡುಗಳು ಮತ್ತು ಸ್ಫೋಟಕ ಸಾಧನ

ಪತ್ತೆಯಾಗಿದೆ. ವಶಪಡಿಸಿಕೊಂಡ ವಸ್ತುಗಳಲ್ಲಿ ೯೦ ಸುತ್ತು ಇಂಸಾಸ್ ರೈಫಲ್ ಮದ್ದುಗುಂಡುಗಳು, ೯೦ ಸುತ್ತು ಎಕೆ-೪೭ ಮದ್ದುಗುಂಡುಗಳು ಮತ್ತು ಒಂದು ಚೀನೀ ಹ್ಯಾಂಡ್ ಗ್ರೆನೇಡ್ ಸೇರಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನಿನ್ನೆ ಜಂಟಿ ಪಡೆಗಳು ಅವಂತಿಪೋರಾದ ವುಯಾನ್ ಖ್ರು ಪ್ರದೇಶದಲ್ಲಿ ನಡೆಸಿದ ಕಾರ್ಯಾಚರಣೆಯ ಸಮಯದಲ್ಲಿ ಭಯೋತ್ಪಾದಕ ಸಹಚರನನ್ನು ಬಂಧಿಸಿ, ಅವನ ಬಳಿ ಇದ್ದ ಪಿಸ್ತೂಲ್ ಮತ್ತು ಜೀವಂತ ಮದ್ದುಗುಂಡುಗಳನ್ನು ವಶಪಡಿಸಿಕೊಂಡಿದ್ದಾರೆ. ಬಂಧಿತ ವ್ಯಕ್ತಿಯನ್ನು ಗುಲಾಬ್ ಬಾಗ್ ಟ್ರಾಲ್ ನಿವಾಸಿ ಅಬ್ದುಲ್ ರಶೀದ್ ಹಜಮ್ ಅವರ ಪುತ್ರ ಜಾವಿದ್ ಅಹ್ಮದ್ ಹಜಮ್ ಎಂದು ಗುರುತಿಸಲಾಗಿದೆ.

<><><><>

'ಇಂದು ರಾಷ್ಟ್ರೀಯ ರೈತ ದಿನಾಚರಣೆ'. ರೈತರ ಕಲ್ಯಾಣ ಹಾಗೂ ಗ್ರಾಮೀಣ ಸಮುದಾಯಗಳ ಅಭಿವೃದ್ಧಿಗೆ ಶ್ರಮಿಸಿದ, ಭಾರತದ ಐದನೇ ಪ್ರಧಾನಮಂತ್ರಿ, ದಿವಂಗತ ಚೌಧರಿ ಚರಣ್ ಸಿಂಗ್ ಅವರ ಜನ್ಮದಿನವಾದ ಇಂದು, ರಾಷ್ಟ್ರೀಯ ರೈತ ದಿನಾಚರಣೆಯಾಗಿ ಆಚರಿಸಲಾಗುತ್ತಿದೆ. ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಚೌಧರಿ ಚರಣ್ ಸಿಂಗ್ ಅವರ ಜನ್ಮದಿನದಂದು ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಚೌಧರಿ ಚರಣ್ ಸಿಂಗ್ ತಮ್ಮ ಇಡೀ ಜೀವನವನ್ನು ರೈತರ ಕಲ್ಯಾಣಕ್ಕಾಗಿ ಮುಡಿಪಾಗಿಟ್ಟರು ಮತ್ತು ಅವರ ಆಲೋಚನೆಗಳು ಅಭಿವೃದ್ಧಿ ಹೊಂದಿದ ಮತ್ತು ಸ್ವಾವಲಂಬಿ ಭಾರತವನ್ನು ನಿರ್ಮಿಸುವಲ್ಲಿ ಯಾವಾಗಲೂ ಪ್ರಸ್ತುತವಾಗಿರುತ್ತವೆ ಎಂದು ಅವರು ಹೇಳಿದ್ದಾರೆ. ರಾಷ್ಟ್ರೀಯ ರೈತ ದಿನದಂದು, ಗ್ರಾಹಕ ವ್ಯವಹಾರಗಳು ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಲ್ಹಾದ್ ಜೋಶಿ ಅವರು, ಅನ್ನದಾತರ ದಣಿವರಿಯದ ಕಠಿಣ ಪರಿಶ್ರಮ ಮತ್ತು ಸಮರ್ಪಣೆ ರಾಷ್ಟ್ರವನ್ನು ಪೋಷಿಸುವುದು ಮಾತ್ರವಲ್ಲದೆ ದೇಶದ ಆತ್ಮವನ್ನು ಬಲಪಡಿಸುತ್ತದೆ ಎಂದು ಹೇಳಿದರು. ದೇಶವು ತನ್ನ ರೈತರಿಗೆ, ದೇಶದ ನಿಜವಾದ ಬೆನ್ನೆಲುಬಾಗಿ ಸದಾ ಕೃತಜ್ಞರಾಗಿರಬೇಕು" ಎಂದು ಸಚಿವರು ತಿಳಿಸಿದ್ದಾರೆ. ರೈತರ ಪ್ರಮುಖ ಪಾತ್ರವನ್ನು ಗುರುತಿಸಿ, ಸರ್ಕಾರವು ಅವರ ಸಾಮಾಜಿಕ-ಆರ್ಥಿಕ ಉನ್ನತಿಯನ್ನು ಬೆಂಬಲಿಸಲು ಮತ್ತು ಸುಸ್ಥಿರ ಕೃಷಿ ಬೆಳವಣಿಗೆಯನ್ನು ಖಚಿತಪಡಿಸಿಕೊಳ್ಳಲು ಹಲವಾರು ಉಪಕ್ರಮಗಳನ್ನು ತೆಗೆದುಕೊಂಡಿದೆ. ಈ ಕಾರ್ಯಕ್ರಮಗಳಲ್ಲಿ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ, ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ ಮತ್ತು ಪ್ರಧಾನ ಮಂತ್ರಿ ಕಿಸಾನ್

ಮಾನ್ ಧನ್ ಯೋಜನೆ ಸೇರಿವೆ. ದೇಶದ ಜನಸಂಖ್ಯೆಯ ಸುಮಾರು ಅರ್ಧದಷ್ಟು ಜನರಿಗೆ ಉದ್ಯೋಗ ನೀಡುವ ಭಾರತದ ಕೃಷಿ ವಲಯವು ದೇಶದ ಆರ್ಥಿಕತೆಯ ಮೂಲಾಧಾರವಾಗಿದೆ ಮತ್ತು ರಾಷ್ಟ್ರ ನಿರ್ಮಾಣದ ಪ್ರಮುಖ ಚಾಲಕ ಶಕ್ತಿಯಾಗಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>